# ಲೋಕಸಭಾ ಚುನಾವಣೆ; ಇಂದಿನಿಂದ ನಾಮಪತ್ರ ಸಲ್ಲಿಕೆ ಆರಂಭ

ಗದಗ ಏಪ್ರಿಲ್11:–ಲೋಕಸಭಾ ಸಾರ್ವತ್ರಿಕ ಚುನಾವಣೆಯು ಈಗಾಗಲೇ ಘೋಷಣೆಯಾಗಿದ್ದು, ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಆ ದಿಸೆಯಲ್ಲಿ ಹಾವೇರಿ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಏಪ್ರಿಲ್ 12 ರಂದು ಚುನಾವಣೆ ಅಧಿಸೂಚನೆ ಹೊರಡಿಸಲಾಗುತ್ತದೆ. ಅಂದಿನಂದಲೇ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಆರಂಭವಾಗಲಿದೆ. ಸಂಬಂಧಪಟ್ಟ ಚುನಾವಣಾಧಿಕಾರಿಗಳಾದ 10–ಹಾವೇರಿ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಹಾವೇರಿ ಹಾಗೂ 3–ಬಾಗಲಕೋಟ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಬಾಗಲಕೋಟ ಇವರು ತಮ್ಮ ಕಾರ್ಯಾಲಯದಲ್ಲಿ ಸ್ವೀಕರಿಸುವರು.

ನಾಮಪತ್ರ ಸಲ್ಲಿಸಲು ಏಪ್ರಿಲ್, 19 ಕೊನೆಯ ದಿನವಾಗಿದೆ. ಏಪ್ರಿಲ್, 20 ರಂದು ನಾಮಪತ್ರ ಪರಿಶೀಲನೆ ಕಾರ್ಯ ನಡೆಯಲಿದ್ದು, ಏಪ್ರಿಲ್, 22 ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಮೇ 7 ರಂದು ಮತದಾನ ನಡೆಯಲಿದ್ದು, ಜೂನ್, 04 ರಂದು ಮತ ಎಣಿಕೆ ಕಾರ್ಯ ನಡೆಯಲಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಅವರು ತಿಳಿಸಿದ್ದಾರೆ.

ದಿನಾಂಕ : 22.01.2024 ರಂದು ಪ್ರಕಟಗೊಂಡ ಅಂತಿಮ ಮತದಾರ ಪಟ್ಟಿಯ ನಂತರ ಈವರೆಗೆ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಗದಗ ಜಿಲ್ಲೆಯಲ್ಲಿ 888816 ಮತದಾರರು ಇದ್ದು, ಇವರಲ್ಲಿ 443291 ಪುರುಷ ಮತದಾರರು ಮತ್ತು 445464 ಮಹಿಳಾ ಮತದಾರರು ಇದ್ದಾರೆ. 61 ಮಂದಿ ಇತರೆ ಮತದಾರರು ಇದ್ದಾರೆ ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದ್ದಾರೆ.

65–ಶಿರಹಟ್ಟಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ 229462 ಮತದಾರರು ಇದ್ದು, ಇವರಲ್ಲಿ 114919 ಪುರುಷ ಮತದಾರರು ಮತ್ತು 114530 ಮಹಿಳಾ ಮತದಾರರು ಇದ್ದು, ಇತರೆ 13 ಮಂದಿ ಮತದಾರರು ಇದ್ದಾರೆ. ಹಾಗೆಯೇ 66–ಗದಗ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಒಟ್ಟು 229081 ಮಂದಿ ಮತದಾರರು ಇದ್ದು, ಇವರಲ್ಲಿ 112988 ಪುರುಷ ಮತದಾರರು 116075 ಮಹಿಳಾ ಮತದಾರರು ಇದ್ದಾರೆ, 18 ಮಂದಿ ಇತರೆ ಮತದಾರರು ಇದ್ದಾರೆ.

67–ರೋಣ ವಿಧಾನಸಭಾ ಕ್ಷೇತ್ರದಲ್ಲಿ 238569 ಮತದಾರರು ಇದ್ದು, ಇವರಲ್ಲಿ 118782ಪುರುಷ ಮತದಾದರರು ಮತ್ತು 1,19,764 ಮಹಿಳಾ ಮತದಾರರು ,ಸೇರಿದಂತೆ 23 ಮಂದಿ ಇತರೆ ಮತದಾರರು ಇದ್ದಾರೆ. ಈ ವಿಧಾನಸಭಾ ಕ್ಷೇತ್ರಗಳು ಹಾವೇರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಬರಲಿದೆ.

ಹಾಗೆಯೇ ಬಾಗಲಕೋಟೆ ಲೋಕಸಭಾ ಕ್ಷೇತ್ರಕ್ಕೆ ಒಳಪಡುವ 68–ನರಗುಂದ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಒಟ್ಟು 191704 ಮತದಾರರು ಇದ್ದು ಇವರಲ್ಲಿ 96602 ಪುರುಷ ಮತದಾರರು ಮತ್ತು 95095 ಮಹಿಳಾ ಮತದಾರರು ಸೇರಿದಂತೆ 7 ಇತರೆ ಮತದಾರರು ಇದ್ದಾರೆ.ಜಿಲ್ಲೆಯಲ್ಲಿ 1525 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 1,486 ಪುರುಷ ಮತದಾರರು ಹಾಗೂ 39 ಮಹಿಳಾ ಮತದಾರರು ಇದ್ದಾರೆ. ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ 179 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 173 ಪುರುಷ ಮತದಾರರು, 6 ಮಹಿಳಾ ಮತದಾರರು ಇದ್ದಾರೆ. ಹಾಗೆಯೇ ಗದಗ ವಿಭಾನಸಭಾ ಕ್ಷೇತ್ರದಲ್ಲಿ 222 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 217 ಪುರುಷ ಮತದಾರರು, 5 ಮಂದಿ ಮಹಿಳಾ ಸೇವಾ ಮತದಾರರು ಇದ್ದಾರೆ.

ರೋಣ ವಿಧಾನಸಭಾ ಕ್ಷೇತ್ರದಲ್ಲಿ 478 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 467 ಪುರುಷ ಮತದಾರರು ಹಾಗೂ 11 ಮಹಿಳಾ ಮತದಾರರು ಇದ್ದಾರೆ. ನರಗುಂದ ವಿಧಾನಸಭಾ ಕ್ಷೇತ್ರದಲ್ಲಿ 646 ಮಂದಿ ಸೇವಾ ಮತದಾರರು ಇದ್ದು, ಇವರಲ್ಲಿ 629 ಪುರುಷ ಮತದಾರರು 17 ಮಹಿಳಾ ಮತದಾರರು ಇದ್ದಾರೆ.

ಗದಗ ಜಿಲ್ಲಾ ವ್ಯಾಪ್ತಿಯಲ್ಲಿ 26,173 ಯುವ ಮತದಾರರು ಇದ್ದು, 13,698 ಪುರುಷ ಯುವ ಮತದಾರರು ಮತ್ತು 12,474 ಯುವ ಮಹಿಳಾ ಹಾಗೂ 01 ಇತರೆ ಮತದಾರರು ಇದ್ದಾರೆ.

ಹಾಗೆಯೇ ಗದಗ ಜಿಲ್ಲೆಯಲ್ಲಿ 11983 ವಿಶೇಷ ಚೇತನ ಮತದಾರರು ಇದ್ದಾರೆ. ಹಾಗೇ 85 ವರ್ಷ ವಯೋಮಿತಿ ಮೀರಿದ ಹಿರಿಯ ನಾಗರೀಕರು 5749 ಜನ ಇದ್ದಾರೆ.ಗದಗ ಜಿಲ್ಲೆಯಲ್ಲಿ ಒಟ್ಟು 961 ಮತಗಟ್ಟೆಗಳಿದ್ದು, ಈ ಪೈಕಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 251, ಗದಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 223, ರೋಣ ವಿಧಾನಸಭಾ ವ್ಯಾಪ್ತಿಯಲ್ಲಿ 267 ಹಾಗೂ ನರಗುಂದ ವಿಧಾನಸಭಾ ಮತಕ್ಷೇತ್ರದಲ್ಲಿ 220 ಮತಗಟ್ಟೆಗಳು ಬರುತ್ತವೆ.

ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ ಖಾತರಿಪಡಿಸಿಕೊಳ್ಳುವುದು, ಮತಗಟ್ಟೆ ಬಗ್ಗೆ ಮಾಹಿತಿ ಪಡೆಯುವುದು ಇತರೆ ಚುನಾವಣೆ ವಿಷಯಗಳಿಗೆ ಸಂಬಂಧಿಸಿದಂತೆ ದೂರು ಸಲ್ಲಿಸಲು/ ಮಾಹಿತಿಯನ್ನು ಪಡೆಯಲು ಜಿಲ್ಲಾಧಿಕಾರಿ ಅವರ ಕಚೇರಿಯಲ್ಲಿ ಟೋಲ್ ಫ್ರೀ ಸಂಖ್ಯೆ 1950 ಕ್ಕೆ ಕರೆ ಮಾಡಬಹುದಾಗಿದೆ. ಹಾಗೆಯೇ ವೋಟರ್ ಸಹಾಯವಾಣಿ 24*7 ಕಾರ್ಯನಿರ್ವಹಿಸಲಾಗುತ್ತದೆ.

ಜಿಲ್ಲೆಯಲ್ಲಿ ಯಾವುದೇ ರೀತಿ ದೂರುಗಳ ನಿರ್ವಹಣೆಗಾಗಿ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಸೈಯದ್ ಜೋಹೈಬುಲ್ಲಾ(ಮೊ.ನಂ: 8277944217) ಇವರನ್ನು ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಲಾಗಿದೆ. ಇವರ ಅಧೀನದಲ್ಲಿ Complaint Monitoring Team, cVIGIL ತಂಡ, 1950 ಕಾಲ್ ಸೆಂಟರ್ ಹಾಗೂ ಜಿಲ್ಲಾ ಕಂಟ್ರೋಲ್ ರೂಂ ಕಾರ್ಯನಿರ್ವಹಿಸುತ್ತವೆ. ಭಾರತ ಚುನಾವಣಾ ಆಯೋಗವು ಸಿ–ವಿಜಿಲ್ ಮೊಬೈಲ್ ಅಪ್ಲಿಕೇಶನ್ ಅಭಿವೃದ್ಧಿ ಪಡಿಸಿದ್ದು. ಈ ಅಪ್ಲಿಕೇಷನ್‌ನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್‌ಲೋಡ್ ಮಾಡಿಕೊಂಡು, ಚುನಾವಣೆಯಲ್ಲಿ ಮತದಾರರಿಗೆ ಅಕ್ರಮವಾಗಿ ಹಣ, ಗೃಹ ಬಳಕೆ ಸಾಮಾಗ್ರಿಗಳು, ಮದ್ಯ ಹಂಚಿಕೆ ಮಾಡುವ ಬಗ್ಗೆ ಹಾಗೂ ಯಾವುದೇ ರೀತಿಯ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳ ಬಗ್ಗೆ ಅಪ್ಲಿಕೇಷನ್‌ನಲ್ಲಿ ವಿಡಿಯೋ ಮತ್ತು ಪೋಟೋಗಳ ಮೂಲಕ ಮಾಹಿತಿ ನೀಡಬಹುದಾಗಿದೆ. ಚುನಾವಣಾ ಆಯೋಗದ ಸೂಚನೆಯಂತೆ ಪ್ರತಿ ಮತಗಟ್ಟೆಗಳಿಗೆ ಒಬ್ಬರು ಅಧ್ಯಕ್ಷಾಧಿಕಾರಿ ಮತ್ತು ಮೂವರು ಮತಗಟ್ಟೆ ಅಧಿಕಾರಿಗಳು ಹಾಗೂ ಮೀಸಲು ಸಿಬ್ಬಂದಿಗಳನ್ನು ನೇಮಕ ಮಾಡಲಾಗುತ್ತದೆ. ಸದರಿ ಅಧಿಕಾರಿಗಳಿಗೆ ಈಗಾಗಲೇ ದಿನಾಂಕ 10.04.2024 ರಂದು ಮೊದಲನೇ ಹಂತದ ತರಬೇತಿಯನ್ನು ನೀಡಲಾಗಿರುತ್ತದೆ. ಅದೇ ರೀತಿ ಕೇಂದ್ರ ಸರ್ಕಾರಿ ಅಧಿಕಾರಿ/ ಸಿಬ್ಬಂದಿಗಳನ್ನು ಆಯ್ದ ಮತಗಟ್ಟೆಗಳಿಗೆ ಮೈಕ್ರೋ ವೀಕ್ಷಕರನ್ನಾಗಿ ನೇಮಕ ಮಾಡಲಾಗುತ್ತದೆ. ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಹಾಗೂ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮೇಲೆ ನಿಗಾ ಇಡಲು ಸೆಕ್ಟರ್ ಅಧಿಕಾರಿಗಳು ಪ್ಲೈಯಿಂಗ್ ಸ್ಕ್ವಾಡ್, ಲೆಕ್ಕ ವೀಕ್ಷಕರ ತಂಡ, ವಿಡಿಯೋ ವಿವಿಂಗ್ ತಂಡ, ವಿಡಿಯೋ ಪರಿಶೀಲನಾ ತಂಡ, ಸಹಾಯಕ ವೆಚ್ಚ ವೀಕ್ಷಕರ ತಂಡಗಳನ್ನು ರಚಿಸಲಾಗಿದೆ.ಜಿಲ್ಲೆಯಲ್ಲಿ ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.ಈವರೆಗೆ ಜಿಲ್ಲೆಯಲ್ಲಿ ರೂ. 20,47,700–00 ನಗದನ್ನು ವಶಪಡಿಸಿಕೊಳ್ಳಲಾಗಿದೆ. 3584.955 ಲೀಟರ್ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ, ಸದರಿ ಮದ್ಯದ ಮೌಲ್ಯ ರೂ. 20,37,547.33 ಆಗುತ್ತದೆ. 0.506 ಕೆ.ಜಿ ಡ್ರಗ್ಸ್ ವಶಪಡಿಸಿಕೊಳ್ಳಲಾಗಿದೆ. ಸದರಿ ಡ್ರಗ್ಸನ ಮೌಲ್ಯ ರೂ. 21,404–00 ಆಗುತ್ತದೆ. 2.00 ಕೆ.ಜಿ ಬೆಳ್ಳಿಯನ್ನು ವಶಪಡಿಸಿಕೊಳ್ಳಲಾಗಿದೆ. ಸದರಿ ಬಂಗಾರದ ಮೌಲ್ಯ ರೂ. 1,60,000–00 ಆಗುತ್ತದೆ. ಇತರೆ ಸಾಮಗ್ರಿಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ, ಈ ಸಾಮಗ್ರಿಗಳ ಮೌಲ್ಯ ರೂ. 42,350–00 ಆಗುತ್ತದೆ. ಒಟ್ಟಾರೆಯಾಗಿ ಎಲ್ಲಾ ಖಜುದಣಡಿಜ ಒಟ್ಟು ಮೊತ್ತ ರೂ 43,09,001.33 ಆಗುತ್ತದೆ. 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ, ವಿಶೇಷ ಚೇತನರಿಗೆ, ಕೋವಿಡ್ ಶಂಕಿತ, ದೃಢಪಟ್ಟ ಮತದಾರರ ಪೈಕಿ ಮನೆಯ ಮೂಲಕ ಮತದಾನ ಮಾಡಲು ಆಯ್ಕೆ ಮಾಡಿದ ಮತದಾರರಿಗೆ ದಿನಾಂಕ : 26.04.2024 ರಿಂದ 28.04.2024 ರವರೆಗೆ ಸದರಿಯವರ ಮನೆಗೆ ತೆರಳಿ ಮತದಾನ ಕಾರ್ಯವನ್ನು ಜರುಗಿಸಲಾಗುವುದು ಹಾಗೂ ಅಗತ್ಯ ಸೇವೆಗಳ ಇಲಾಖೆಗಳ ನರತ ಅಧಿಕಾರಿ ಸಿಬ್ಬಂದಿಗಳ ಪೈಕಿ ವಿಶೇಷ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ಆಯ್ಕೆ ಮಾಡಿಕೊಂಡ ಮತದಾರರಿಗೆ ದಿನಾಂಕ 01.05.2024 ರಿಂದ 03.05.2024 ರವರೆಗೆ ಅಂಚೆ ಮತದಾನ ಸೌಲಭ್ಯ ಕೇಂದ್ರದಲ್ಲಿ ಮತದಾನವನ್ನು ಮಾಡಲು ಅವಕಾಶ ಕಲ್ಪಿಸಲಾಗಿದೆ. 2024 ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪ್ರತಿಯೊಬ್ಬ ಮತದಾರರು ಸಹ ಅವರ ಹಕ್ಕನ್ನು ಚಲಾಯಿಸಲು ಅಡೆತಡೆಗಳಾಗದಂತೆ ಎಲ್ಲರೂ ಸಹ ಮತದಾನದಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾಡಳಿತದಿಂದ ಎಲ್ಲಾ ಕ್ರಮ ಕೈಗೊಳ್ಳಲಾಗಿದೆ. ಭಾರತ ಚುನಾವಣಾ ಆಯೋಗದ ಎಲ್ಲಾ ನಿಯಮಗಳಂತೆ ಕಟ್ಟುನಿಟ್ಟಾಗಿ ಪಾಲಿಸಿ ಚುನಾವಣೆಯನ್ನು ನಡೆಸಲು ಜಿಲ್ಲೆಯ ಎಲ್ಲಾ ಮತದಾರರು, ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳ ಸಹಕಾರ ಕೋರಿದೆ.

ಚುನಾವಣೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಯನ್ನು ಭಾರತ ಚುನಾವಣಾ ಆಯೋಗದ ವೆಬ್‌ಸೈಟ್ www.eci.nic.in ಮತ್ತು ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ವೆಬ್‌ಸೈಟ್ www.ceokarnataka.kar.nic.in ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ವೆಬ್‌ಸೈಟ್ ತಿತಿತಿ.ರಚಿಜಚಿರ.ಟುಛಿ.ಟಿ ನಲ್ಲಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್.ಅವರು ತಿಳಿಸಿದ್ದಾರೆ.

## ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯ ನ್ಯಾಯ ಪತ್ರ ಒಂದು ಸುಳ್ಳಿನ ಕಂತೆ : ಡಾ. ಶೇಖರ್ ಸಜ್ಜನರ



ಗದಗ 10: ಕಳೆದ ಹತ್ತು ವರ್ಷಗಳಿಂದ ದೇಶದಲ್ಲಿ ವಿರೋಧಪಕ್ಷವಾಗಿ ಸಮರ್ಥವಾಗಿ ನಿಭಾಯಿಸದೆ ಟುಕಡೆ ಟುಕಡೆ ಗ್ಯಾಂಗ್ ಜೊತೆಗೂಡಿ ದೇಶದ ಅಭಿವೃದ್ಧಿಗೆ ಮಾರಕ ಆಗುವಂತ ಅನೇಕ ನಿರ್ಧಾರಗಳನ್ನು ಕೈಗೊಂಡು ಈಗ ಲೋಕಸಭೆ ಸಾರ್ವತ್ರಿಕ ಚುನಾವಣೆಯಲ್ಲಿ 25 ಸುಳ್ಳು ಭರವಸೆಗಳನ್ನು ಕೊಡುವುದರ ಮೂಲಕ ದೇಶದ ಜನರನ್ನು ದಾರಿ ತಪ್ಪಿಸುವಂಥ ಕೆಲಸವನ್ನ ಕಾಂಗ್ರೆಸ್ ಪಕ್ಷ ಮಾಡುತ್ತಿದೆ. ಕರ್ನಾಟಕದಲ್ಲಿ 2023ರಲ್ಲಿ 5 ಗ್ಯಾರಂಟಿಗಳನ್ನು ಘೋಷಿಸಿ ಕಳೆದ 10 ತಿಂಗಳಿಂದ ಅವುಗಳ ಅನುಷ್ಠಾನಕ್ಕೆ ಒಂದೂವರೆ ಲಕ್ಷ ಕೋಟಿ ಸಾಲವನ್ನು ಮಾಡಿ ಸಾರ್ವಜನಿಕರನ್ನು ಸಾಲದ ಕೂಪಕ್ಕೆ ದೂಡಿದ ಹೆಗ್ಗಳಿಕೆ ಕಾಂಗ್ರೆಸ್ ಸರ್ಕಾರದ್ದು. ಈಗ ದೇಶದ ಜನರನ್ನು ಮೂರ್ಖರನ್ನಾಗಿ ಮಾಡಲು 25 ಜಾರಿಗೊಳಿಸಲಾಗದಂತ ಪೊಳ್ಳು ಭರವಸೆಗಳನ್ನು ನೀಡಿ ಮತ್ತೆ ದೇಶವನ್ನು ಸಾಲದ ಸುಳಿಯಲ್ಲಿ ಸಿಕ್ಕಿಸಲು ಹೊಸ ಪ್ರಯತ್ನ ನಡೆದಿದೆ. ದೇಶದ ಪ್ರಜ್ಞಾವಂತ ನಾಗರಿಕರು ದೇಶದ ಮುಂದಿನ ಭವಿಷ್ಯಕ್ಕಾಗಿ ಕಳೆದ ಹತ್ತು ವರ್ಷಗಳಿಂದ ವಿಶ್ವ ನಾಯಕನೆನಿಸಿಕೊಂಡು ಅಭಿವೃದ್ಧಿಯ ಹರಿಕಾರ ಶ್ರೀ ನರೇಂದ್ರ ಮೋದಿಜಿ ಅವರು ಮುನ್ನಡೆಸಿದ್ದಾರೆ. ಅವರ ಕೈ ಬಲಪಡಿಸಲು ಮತ್ತೊಮ್ಮೆ ನರೇಂದ್ರ ಮೋದಿಜಿ ಅವರು ಬಹುಮತದೊಂದಿಗೆ ದೇಶದ ಪ್ರಧಾನ ಆದರೆ ದೇಶ ಸುರಕ್ಷಿತವಾಗಿ ಸುಭೀಕ್ಷವಾಗಲಿದೆ. ದೇಶದಲ್ಲಿ ಸೈನಿಕ ಶಕ್ತಿಯನ್ನು ಹೆಚ್ಚಿಸಲು ಕೈಗೊಂಡ ಅಗ್ನಿಪಥ ಯೋಜನೆಯನ್ನು ರದ್ದು ಮಾಡುತ್ತೇವೆ ಎಂದು ಘೋಷಿಸಿದ್ದು ಕಾಂಗ್ರೆಸ್ನ ಬೌದ್ಧಿಕ ದಿವಾಳಿತನವನ್ನು ತೋರಿಸುತ್ತದೆ. ದೇಶವನ್ನು ಅರುವತ್ತು ವರ್ಷಗಳ ಕಾಲ ಲೂಟಿ ಮಾಡಿದ ಕಾಂಗ್ರೆಸ್ ಸರ್ಕಾರ ಮತ್ತೊಮ್ಮೆ ಬೇಕೆ? ಕಳೆದ 10 ವರ್ಷಗಳಲ್ಲಿ ಒಂದೇ ಒಂದು ರೂಪಾಯಿ ಭ್ರಷ್ಟಾಚಾರ ಇಲ್ಲದೇ ಅತ್ಯಂತ ಪಾರದರ್ಶಕ ಆಡಳಿತ ನೀಡಿದ್ದಾರೆ. ಮತ್ತು ನಮ್ಮ ದೇಶದ ಬಾಹ್ಯ ಮತ್ತು ಆಂತರಿಕ ಸುರಕ್ಷತೆಯನ್ನು ನೀಡಿದ್ದಾರೆ. ನಮ್ಮ ನೆರೆಯ ಭಯೋತ್ಪಾದನೆ ದೇಶ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಿದ್ದಾರೆ. ಚೀನಾ ದೇಶ ಭಾರತ ದೇಶದ ಸುರಕ್ಷತೆಗೆ ತನ್ನ ಕುತಂತ್ರ ಬುದ್ಧಿ ತೋರಿಸುತ್ತಿತ್ತು. ನಮ್ಮ ದೇಶದ ಸೈನಿಕ ಶಕ್ತಿಯನ್ನು ಚೀನಾ ದೇಶಕ್ಕೆ ತೋರಿಸಿ ಈಗ ಚೀನಾ ದೇಶ ಭಾರತ ದೇಶದ ಸೈನಿಕ ಶಕ್ತಿಯನ್ನು ನೋಡಿ ಹೆದರಿ ಕುಂತಿದೆ. ಇಡೀ ವಿಶ್ವವೇ ಭಾರತದ ದೇಶದ ಶಕ್ತಿಯನ್ನು ಕಂಡು ಇಂದು ಜಗತ್ತಿನ ಎಲ್ಲ ರಾಷ್ಟ್ರಗಳು ಭಾರತದ ದೇಶದ ಶಕ್ತಿಯನ್ನು ಕಂಡು ವಿಶ್ವಗುರು ಸ್ಥಾನವನ್ನು ನೀಡುತ್ತಿವೆ. ಇಡೀ ಜಗತ್ತಿನ ಎಲ್ಲ ರಾಷ್ಟ್ರಗಳಲ್ಲಿ ಭಾರತೀಯರಿಗೆ ಗೌರವ ಮನ್ನಣೆ ಸಿಕ್ಕಿದೆ. ಇಲ್ಲಿಯವರೆಗೆ ಜಗತ್ತಿನಲ್ಲಿ ಚಿಕ್ಕ ಚಿಕ್ಕ ದೇಶಗಳು ಭಾರತವನ್ನು ಹೆದರಿಸುತ್ತಿದ್ದವು. ಆದರೆ ಮೋದಿಜಿಯವರು ತನ್ನದೇ ಆದ ವಿದೇಶಾಂಗ ನೀತಿಯಿಂದ ಜಗತ್ತಿನ ಪ್ರಬಲ ಮುಸ್ಲಿಂ ರಾಷ್ಟ್ರಗಳು ಭಾರತದ ಸ್ನೇಹಕ್ಕೆ ತಲೆಬಾಗಿವೆ. ಮುಸ್ಲಿಂ ರಾಷ್ಟ್ರಗಳು ಪ್ರಧಾನ ನರೇಂದ್ರ ಮೋದಿಜಿಯವರಿಗೆ ಆ ದೇಶದ ಅತ್ಯುನ್ನತ ಪ್ರಶಸ್ತಿಯನ್ನು ನೀಡಿ ಗೌರವಿಸಿವೆ. ಕೆಲವೊಂದು ಮುಸ್ಲಿಂ ರಾಷ್ಟ್ರಗಳಲ್ಲಿ ಭಾರತದ ನಾಗರಿಕರಿಗೆ ಮೊದಲ ಆದ್ಯತೆ ನೀಡುತ್ತಿವೆ. ನರೇಂದ್ರ ಮೋದಿಜಿಯವರು ಸಬ್ ಕಾ ಸಾಥ್, ಸಬ್ ಕಾ ವಿಶ್ವಾಸ ಎಂಬ ಘೋಷಣೆಯೊಂದಿಗೆ ಭಾರತದ 140 ಕೋಟಿ ಜನತೆಗಾಗಿ ಕೆಲಸ ಮಾಡುತ್ತಿದ್ದಾರೆ. ಕಾಂಗ್ರೆಸ್ ಮತ್ತು ವಿರೋಧ ಪಕ್ಷಗಳಿಗೆ ಮೋದಿ ಜನಪ್ರಿಯತೆಯನ್ನು ಸಹಿಸಲು ಆಗುತ್ತಿಲ್ಲ ಅತ್ಯಂತ ಕೀಳುಮಟ್ಟದ ರಾಜಕಾರಣ ಮಾಡುತ್ತಿವೆ. ಕಾರಣ ದೇಶದ ಪ್ರಜ್ಞಾವಂತ ಮತದಾರರು ಮತ್ತೊಮ್ಮೆ ಮೋದಿಜಿ ಅವರಿಗೆ ಅವಕಾಶವನ್ನ ಕೊಡಲಿದ್ದಾರೆಂದು ಅನೇಕ ಸಮೀಕ್ಷೆಗಳು ದೃಢಪಡಿಸುತ್ತಿವೆ. 18ನೇ ಲೋಕಸಭಾ ಚುನಾವಣೆಯಲ್ಲಿ ಹಾವೇರಿ ಲೋಕಸಭಾ ಬಿಜೆಪಿ ಅಭ್ಯರ್ಥಿಗಳಾದಂತಹ ಮಾಜಿ ಮುಖ್ಯಮಂತ್ರಿಗಳು ಒಳ್ಳೆಯ ಆಡಳಿತಗಾರರು ಆದಂತಹ ಶ್ರೀ ಬಸವರಾಜ್ ಬೊಮ್ಮಾಯಿ ಅವರಿಗೆ ಮತವನ್ನು ಕೊಡುವುದರ ಮೂಲಕ ಆರಿಸಿ ಮೂರನೆಯ ಬಾರಿ ನರೇಂದ್ರ ಮೋದಿಜಿ ಅವರು ಪ್ರಧಾನ ಮಂತ್ರಿಗ ಳಾಗಲೆಂದು ವಿಶ್ರಾಂತ ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ಆಯುಕ್ತರಾದ ಡಾ. ಶೇಖರ್ ಸಜ್ಜನರ ಅವರು ತಮ್ಮ ಪ್ರಚಾರ ಸಂದರ್ಭದಲ್ಲಿ ಹಾವೇರಿ ಲೋಕಸಭಾ ಕ್ಷೇತ್ರದ ಜನತೆಯಲ್ಲಿ ವಿನಂತಿಸಿಕೊಂಡಿದ್ದಾರೆ.

## ಅನುಮತಿ ಇಲ್ಲದ ಹಾಗೂ ಪ್ರಚೋದನಕಾರಿ ಕರಪತ್ರ ಮುದ್ರಿಸುವಂತಿಲ್ಲ: ಜಿಲ್ಲಾಧಿಕಾರಿ ಟಿ.ಭೂಬಾಲನ್



ವಿಜಯಪುರ ಏ.: ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಹಿನ್ನೆಲೆಯಲ್ಲಿ ಚುನಾವಣಾ ಅಭ್ಯರ್ಥಿಗಳು ಕರಪತ್ರದಲ್ಲಿ ಅನುಮತಿ ಇಲ್ಲದ ಹಾಗೂ ಪ್ರಚೋದನಾಕಾರಿ ಅಂಶಗಳನ್ನು ಮುದ್ರಿಸಬಾರದು ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಟಿ ಟಿ.ಭೂಬಾಲನ್ ಸೂಚಿಸಿದರು. ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಿಂಟಿಂಗ್ ಪ್ರೆಸ್ ಮಾಲಿಕರ ಸಭೆಯಲ್ಲಿ ಮಾತನಾಡಿ, ಯಾವುದೇ ರೀತಿಯ ರಾಜಕೀಯ ಮತಪ್ರಚಾರ ಮತ್ತು ಕೋಮುಗಲಭೆ ಸೃಷ್ಟಿಸುವ ಫ್ಲೇಕ್ಸ್, ಕರಪತ್ರ, ಬ್ಯಾನರ್‌ಗಳನ್ನು ಮುದ್ರಿಸುವಂತಿಲ್ಲ. ಇದನ್ನು ಉಲ್ಲಂಘಿಸಿದರೆ ಪ್ರಜಾಪ್ರತಿನಿಧಿ ಕಾಯ್ದೆಯ ಪ್ರಕಾರ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು. ಅಭ್ಯರ್ಥಿಗಳು ಹಾಗೂ ಪ್ರಿಂಟಿಂಗ್ ಪ್ರೆಸ್ ಮಾಲಕರು ತಾವು ಮುದ್ರಿಸುವ ವಿಷಯಗಳ ಮಾದರಿಯನ್ನು ಜಿಲ್ಲಾಡಳಿತಕ್ಕೆ ಮೂರು ದಿನಗಳ ಮುಂಚಿತವಾಗಿ ತಿಳಿಸಬೇಕು. ಜಿಲ್ಲಾಡಳಿತದಿಂದ ಅನುಮತಿ ಪಡೆದ ನಂತರ ಕರಪತ್ರವನ್ನು ಮುದ್ರಿಸಬಹುದಾಗಿದೆ. ಹಾಗೂ ಕಡ್ಡಾಯವಾಗಿ ಕರಪತ್ರದಲ್ಲಿ ಮುದ್ರಕರ ಹೆಸರು, ಮುದ್ರಣ ಮಾಡಿದ ಕರಪತ್ರಗಳ ಸಂಖ್ಯೆಯನ್ನು ನಮೂದಿಸಬೇಕು ಎಂದು ತಿಳಿಸಿದರು. ಯಾವುದೇ ರೀತಿಯ ಅಪಪ್ರಚಾರ, ಸುಳ್ಳು ಮಾಹಿತಿ, ಕೋಮುಗಲಭೆ ಸೃಷ್ಟಿಸುವಂತಹ ಕರಪತ್ರ, ಪೋಸ್ಟರ್, ಬ್ಯಾನರ್ ಮುದ್ರಿಸಲು ಅನುಮತಿ ಇರುವದಿಲ್ಲ. ಮಾಲಿಕರ ನಿಯಮ ಉಲ್ಲಂಘಿಸಿದರೆ ಪ್ರಜಾಪ್ರತಿನಿಧಿ ಕಾಯ್ದೆ ಅನ್ವಯ 6 ತಿಂಗಳು ಜೈಲು ಮತ್ತು 2 ಸಾವಿರ ರೂಪಾಯಿ ದಂಡ ವಿಧಿಸಬೇಕಾಗುತ್ತದೆ ಎಂದು ತಿಳಿಸಿದರು. ಪ್ರಿಂಟಿಂಗ್ ಪ್ರೆಸ್ ಮಾಲಿಕರು ಬೇರೆ ಸ್ಥಳದಿಂದ ಮುದ್ರಿಸಿ, ನಮ್ಮ ಜಿಲ್ಲೆಯಲ್ಲಿ ಹಂಚುತ್ತಿದ್ದಾರೆ ಇದ್ದಕ್ಕೆ ಕಡಿವಾಣ ಹಾಕಲು ಈಗಾಗಲೇ ಎಸ್‌ಎಸ್‌ಟಿ ಮತ್ತು ಎಫ್‌ಎಸ್‌ಟಿ ತಂಡಗಳು ಕಾರ್ಯಪ್ರವೃತ್ತವಾಗಿವೆ. ಅಂತಹ ಘಟನೆಗಳು ಕಂಡುಬಂದರೆ ಕೂಡಲೇ ಚುನಾವಣಾಧಿಕಾರಿಗಳ ಗಮನಕ್ಕೆ ತರಬೇಕು ಎಂದು ಸೂಚಿಸಿದರು. ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿ ಮತ್ತು ರಾಜಕೀಯ ಪಕ್ಷಗಳು ಚುನಾವಣಾ ವೆಚ್ಚದ ಸರಿಯಾದ ನಿರ್ವಹಣೆ ಮಾಡಬೇಕಾಗಿದೆ. ಫ್ಲೇಕ್ಸ್, ಬ್ಯಾನರ್ ಮುದ್ರಣಗಳು ಅಭ್ಯರ್ಥಿಯ ಚುನಾವಣೆ ವೆಚ್ಚಕ್ಕೆ ಸೇರ್ಪಡೆಯಾಗಲಿದೆ. ಅಭ್ಯರ್ಥಿಗಳು 10 ಸಾವಿರಕ್ಕಿಂತ ಹೆಚ್ಚು ಹಣ ಪಾವತಿ ಮಾಡಬೇಕಾದ ಸಂದರ್ಭದಲ್ಲಿ ಕಡ್ಡಾಯವಾಗಿ ಚೆಕ್ ರೂಪದಲ್ಲಿ ಪಾವತಿ ಮಾಡಬೇಕು ಎಂದು ಸೂಚಿಸಿ ದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಹಾಗೂ ಜಿಲ್ಲೆಯ ವಿವಿಧ ಪ್ರಿಂಟಿಂಗ್ ಪ್ರೆಸ್ ಮಾಲೀಕರು ಹಾಗು ಸಿಬ್ಬಂದಿ ಇದ್ದರು

## ಕರಪತ್ರ, ಪೋಸ್ಟರ್‌ಗಳ ಮೇಲೆ ಮುದ್ರಕರ, ಪ್ರಕಾಶಕರ ಹೆಸರು, ವಿಳಾಸ ಕಡ್ಡಾಯ

(1 ನೇ ಪುಟದಿಂದ)

ಕರಪತ್ರ / ಪೋಸ್ಟರ್‌ನ ಮೇಲೆ ಮುದ್ರಕ ಮತ್ತು ಪ್ರಕಾಶಕರ ಹೆಸರು ಮತ್ತು ವಿಳಾಸವನ್ನು ಹೊಂದಿರದ ಪ್ರಚಾರ ಸಾಮಗ್ರಿಗಳ 'ಮುದ್ರಣ ಅಥವಾ ಪ್ರಕಟಿಸುವುದನ್ನು' ಸ್ಪಷ್ಟವಾಗಿ ನಿಷೇಧಿಸುತ್ತದೆ ಹಾಗೂ ಅಂತವರ ಮೇಲೆ ಕಾಯ್ದೆ ಪ್ರಕಾರ ಕ್ರಮ ಕೈಗೊಳ್ಳಲಾಗುವುದು.ಮೇಲಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಉದ್ದೇಶದಿಂದ ಹೋರ್ಡಿಂಗ್‌ಗಳು/ಪೋಸ್ಟರ್‌ಗಳು/ಬ್ಯಾನರ್‌ಗಳು ಇತ್ಯಾದಿಗಳಿಗೆ ಜವಾಬ್ದಾರರಾಗಿರುವ ಎಲ್ಲಾ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳು ಈ ಬಗ್ಗೆ ಅಗತ್ಯ ನಿಗಾ ವಹಿಸಲು ಸೂಚಿಸಿದೆ.

ಎಲ್ಲ ರಾಜಕೀಯ ಪಕ್ಷಗಳು ಕೂಡ ಇದರ ಬಗ್ಗೆ ಸಂಪೂರ್ಣ ಮಾಹಿತಿಯೊಂದಿಗೆ ತಮ್ಮ ಕರಪತ್ರ, ಪೋಸ್ಟರ್ ಅಥವಾ ಬ್ಯಾನರ್‌ಗಳನ್ನು ಪ್ರಕಟಿಸಬೇಕು. ಜನತಾ ಪ್ರಾತಿನಿಧ್ಯ ಕಾಯ್ದೆ 1951ರ ಉಲ್ಲಂಘನೆಯನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಷ್ಟಗಿ ತಾಲೂಕ ಆರ್‌ಡಿಪಿಆರ್ ನೌಕರರು ಹಾಗೂ ಸಿಬ್ಬಂದಿ ರವರಿಂದ ಮತದಾನ ಜಾಗೃತಿಗಾಗಿ ಬೈಕ್ ರ್‍ಯಾಲಿ

## ಕುಷ್ಟಗಿ ಪಟ್ಟಣ ಹಾಗೂ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ಬೃಹತ್ ಮತದಾನ ಜಾಗೃತಿ




ಕೊಪ್ಪಳ ಏಪ್ರಿಲ್ 10 : ಲೋಕಸಭಾ ಚುನಾವಣೆ–2024 ರ ಅಂಗವಾಗಿ ಮತದಾನ ಜಾಗೃತಿಗಾಗಿ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಬುಧವಾರದಂದು ಕುಷ್ಟಗಿ ಪಟ್ಟಣ ಮತ್ತು ಗ್ರಾಮ ಪಂಚಾಯತಿಗಳಲ್ಲಿ ಹಮ್ಮಿಕೊಂಡಿದ್ದ ಬೈಕ್ ರ್‍ಯಾಲಿ ಜಾಗೃತಿ ಕಾರ್ಯಕ್ರಮಕ್ಕೆ ತಾಲೂಕ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳಾದ ನಿಂಗಪ್ಪ ಎಸ್. ಮಸಳಿ ರವರು ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಚುನಾವಣೆಯನ್ನು ಎಲ್ಲರೂ ಹಬ್ಬದಂತೆ ಆಚರಿಸಬೇಕು. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕೆಂಬ ಉದ್ದೇಶದಿಂದ ವಿನೂತನವಾಗಿ ಸ್ವೀಪ್ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡು ಇಂದು ಕುಷ್ಟಗಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಹಾಗೂ ನೀಡಶೇಸಿ, ಮಾರ್ಗವಾಗಿ ತಳುವಗೇರ ಗ್ರಾಮ ಪಂಚಾಯತಿಗಳಲ್ಲಿ ಈ ಒಂದು ಬೃಹತ್ ಬೈಕ್ ರ್‍ಯಾಲಿ ಮೂಲಕ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮ ಆಚರಿಸಲಾಗುತ್ತಿದೆ ಎಂದರು.

ತಾಲೂಕು ಪಂಚಾಯತ್ ಅಧಿಕಾರಿಗಳು, ಸಿಬ್ಬಂದಿ ಹಾಗೂ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ರ್‍ಯಾಲಿಯಲ್ಲಿ ಭಾಗವಹಿಸಿದ್ದು, ಇದೇ ರೀತಿ ಎಲ್ಲರೂ ಮತದಾನ ಮಾಡುವ ಮೂಲಕ ತಾಲೂಕಿನಲ್ಲಿ ಶೇ.100 ರಷ್ಟು ಮತದಾನ ನಡೆಯುವಂತೆ ಸಹಕರಿಸಿ ಎಂದು ಮನವಿ ಮಾಡಿದರು.

ಬೈಕ್ ರ್‍ಯಾಲಿ: ಜಾಗೃತಿ ವಾಹಿನಿ ಜಾಥಾ: ಕುಷ್ಟಗಿ ಪಟ್ಟಣದ ಮಲಯ್ಯ ಸರ್ಕಲ್, ಮಹಾವೀರ್ ಸರ್ಕಲ್ , ಮಾರುತಿ ಸರ್ಕಲ್, ಅಂಬೇಡ್ಕರ್ ಸರ್ಕಲ್, ತಹಸೀಲ್ದಾರ್ ಕಚೇರಿ ಮಾರ್ಗವಾಗಿ ಆರಂಭವಾದ ಬೈಕ್ ರ್‍ಯಾಲಿಯು ನೀಡಶೇಸಿ ಮಾರ್ಗವಾಗಿ ತಳುವಗೇರ ಗ್ರಾಮದಲ್ಲಿ ಅಂತ್ಯಗೊಂಡಿತು. ಮತದಾನ ಜಾಗೃತಿ ಹೆಂಡ್ ಔಟ್ಸ್ ಗಳನ್ನು ಹಿಡಿದುಕೊಂಡು ಜಾಥಾ ಉದ್ದಕ್ಕೂ ಮತದಾನದ ಮಹತ್ವವನ್ನು ಸಾರುವ ಜಿಂಗಲ್ಸ್ ಗಳನ್ನು ಸಹ ಪ್ರಸಾರ ಮಾಡುವ ಮೂಲಕ, 100 ಕ್ಕೂ ಹೆಚ್ಚು ದ್ವಿ ಚಕ್ರ ವಾಹನಗಳ ಮೂಲಕ ಅರಿವು ಮೂಡಿಸಲಾಯಿತು.

ಪ್ರತಿಜ್ಞಾವಿಧಿ ಬೋಧನೆ: ತಳುವಗೇರ ಗ್ರಾಮದ ಶರಣಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ನಿಂಗಪ್ಪ ಮೂಲಿಮನಿ ರವರು ಪ್ರತಿಜ್ಞಾವಿಧಿ ಬೋಧಿಸುವ ಮೂಲಕ ಜನರಿಗೆ ಮತದಾನ ಜಾಗೃತಿ ಮೂಡಿಸಲಾಯಿತು. ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರಾದ(ಗ್ರಾ.ಉ) ನಿಂಗನಗೌಡ ವಿ.ಹೆಚ್., ತಾಲೂಕ ಮಟ್ಟದ ವಿವಿಧ ಇಲಾಖೆಯ ಅಧಿಕಾರಿ ವರ್ಗ ಸೇರಿದಂತೆ ತಾಲ್ಲೂಕು ಪಂಚಾಯತ್ ಸಿಬ್ಬಂದಿಗಳು, ತಾಲೂಕಿನ ಎಲ್ಲಾ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಕರ ವಸೂಲಿಗಾರರು ಡಿಇಓ ರವರು, ಸಿಬ್ಬಂದಿ ಹಾಗೂ ಇತರರು ಹಾಜರಿದ್ದರು.

### ಬೆಣಕಲ್ ಗ್ರಾಮದ ನರೇಗಾ ಕೂಲಿಕಾರರಿಗೆ ಮತದಾನ ಸ್ವೀಪ್ ಜಾಗೃತಿ ಕಾರ್ಯಕ್ರಮ

## ಕೂಲಿಕಾರರು ಆರೋಗ್ಯದಿಂದಿರಲು ಆರೋಗ್ಯ ತಪಾಸಣೆ



ಕೊಪ್ಪಳ ಏಪ್ರಿಲ್ : ಬೆಣಕಲ್ ಗ್ರಾಮ ಪಂಚಾಯತಿ ವ್ಯಾಪ್ತಿಯ ನರೇಗಾ ಕಾಮಗಾರಿ ಸ್ಥಳದಲ್ಲಿ ಬುಧವಾರದಂದು ವಲಸೆ ಯಾಕ್ರಿ ನಮ್ಮೂರಲ್ಲೇ ಉದ್ಯೋಗ ಖಾತ್ರಿ, ದುಡಿಮೆಯ ಖಾತ್ರಿ ಅಭಿಯಾನ, ಆರೋಗ್ಯ ತಪಾಸಣಾ ಶಿಬಿರ ಹಾಗೂ ಮತದಾನ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಸಹಾಯಕ ನಿರ್ದೇಶಕರಾದ (ಗಾ.ಉ) ಶರಣಪ್ಪ ಕೆಳಗಿನಮನಿ ಮಾತನಾಡಿ, ಮಹಾತ್ಮಗಾಂಧಿ ನರೇಗಾ ಯೋಜನೆಯು ಗ್ರಾಮೀಣ ಪ್ರದೇಶದಲ್ಲಿ ಅಕುಶಲ ಕೂಲಿಕಾರ್ಮಿಕರು ಗುಳೆ ಹೋಗದಂತೆ ನೆಮ್ಮದಿಯ ಜೀವನ ನಿರ್ವಹಣೆಗೆ ಮಹಾತ್ವಕಾಂಕ್ಷಿ ಯೋಜನೆಗಳಲ್ಲೊಂದು. ಕೂಲಿಕಾರರು ರೈತಾಪಿ ಕೃಷಿ ಚಟುವಟಿಕೆ ಇಲ್ಲದೇ ಇರುವ, ಅಂದರೆ ಬೇಸಿಗೆ ಅವಧಿಯಲ್ಲಿ ಕೂಲಿಕಾರರು ಬದು ನಿರ್ಮಾಣ, ಕೃಷಿ ಹೊಂಡ, ನಾಲಾ ಸುಧಾರಣೆ, ಕೆರೆಹೂಳೆತ್ತುವ ಕಾಮಗಾರಿ ಸೇರಿದಂತೆ ಹಲವಾರು ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಒಳ್ಳೆಯ ಅವಕಾಶವಿದೆ. ನರೇಗಾ ಆಯುಕ್ತಾಲಯವು ವಲಸೆ ಯಾಕ್ರಿ ನಮ್ಮೂರಲ್ಲೇ ಉದ್ಯೋಗ ಖಾತ್ರಿ, ದುಡಿಮೆಯ ಖಾತ್ರಿ ಅಭಿಯಾನವನ್ನು ಪ್ರಾರಂಭಿಸಿ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ನಿರಂತರ ಕೆಲಸ ನೀಡುತ್ತಿದೆ. ಇದನ್ನು ಎಲ್ಲಾ ಕೂಲಿಕಾರರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಪ್ರಸ್ತುತ ವರ್ಷದಲ್ಲಿ ಶೇ.10 ಕೂಲಿ ಮೊತ್ತವನ್ನು ಸರ್ಕಾರ ಹೆಚ್ಚಿಸಿದ್ದು, ಕೂಲಿ ಮೊತ್ತ ರೂ.349/– ಆಗಿದೆ. ಇದರ ಸದುಪಯೋಗವನ್ನು ಎಲ್ಲ ಕೂಲಿಕಾರರು ಪಡೆದುಕೊಳ್ಳಬೇಕು, ಅಳತೆ ಪ್ರಕಾರ ಕೆಲಸ ಮಾಡಿ ಪೂರ್ಣ ಪ್ರಮಾಣದ ಕೂಲಿಯನ್ನ ಪಡೆದುಕೊಳ್ಳಬೇಕು ಎಂದರು.

ಕೂಲಿಕಾರರ ಆರೋಗ್ಯ ತಪಾಸಣೆ:

ಇದೇ ಸಂದರ್ಭ ಕೂಲಿಕಾರರಿಗೆ ಆರೋಗ್ಯ ತಪಾಸಣೆ ಕೈಗೊಳ್ಳಲಾಯಿತು. ಈ ಕುರಿತು ಮಾತನಾಡಿದ ಸಹಾಯಕ ನಿರ್ದೇಶಕರು, ಆರೋಗ್ಯವೇ ಭಾಗ್ಯ. ಆರೋಗ್ಯಕ್ಕಿಂತ ಮತ್ತೊಂದಿಲ್ಲ ಎಲ್ಲರೂ ಆರೋಗ್ಯವಂತರಾಗಬೇಕು. ಪ್ರಸ್ತುತ ದಿನಗಳಲ್ಲಿ ಅಸಹಜ ಸಾವುಗಳು ಸಂಭವಿಸುತ್ತಿದ್ದು ಸಕ್ಕರೆ ಖಾಯಿಲೆ, ಅಧಿಕ ರಕ್ತದೊತ್ತಡ ಖಾಯಿಲೆಗಳಂತಹ ರೋಗಗಳಿಂದ ಮುಕ್ತರಿರಬೇಕು. ಅದಕ್ಕಾಗಿ 40 ವರ್ಷ ಮೇಲ್ಪಟ್ಟ ಎಲ್ಲರೂ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದರು.

ಮತದಾನ ಜಾಗೃತಿ:

ಈಗಾಗಲೇ ಲೋಕಸಭಾ ಚುನಾವಣಾ ದಿನಾಂಕ ಘೋಷಣೆಯಾಗಿದ್ದು, ಎಲ್ಲರೂ ಮೇ–7 ರಂದು ತಪ್ಪದೇ ಮತದಾನ ಮಾಡಬೇಕು. ಸುಭದ್ರ ದೇಶಕ್ಕಾಗಿ ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ, ಉತ್ತಮ ನಾಯಕರನ್ನು ಆಯ್ಕೆ ಮಾಡುವ ಜವಾಬ್ದಾರಿ ಎಲ್ಲರ ಮೇಲೆ ಇದೆ. ಜನರೇ ತಮ್ಮನ್ನು ಆಳುವ ರಾಜರನ್ನು ಆಯ್ಕೆ ಮಾಡಿಕೊಳ್ಳಲು ನಮ್ಮ ಸಂವಿಧಾನ ಅವಕಾಶ ಕೊಟ್ಟಿದೆ. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ ಎಂದರು.

ತಾಲೂಕು ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ ಪ್ರತಿಜ್ಞಾ ವಿಧಿ ಬೋಧಿಸಿದರು. ಸ್ಥಳದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಬಿ. ಕೃಷ್ಣಾ ರಡ್ಡಿ, ಆರೋಗ್ಯ ಅಧಿಕಾರಿಗಳಾದ ಡಾ. ಶಕುಂತಲಾ ಅಂಗಡಿ, ಗ್ರಾ.ಪಂ ಕಾರ್ಯದರ್ಶಿ ಮಾರುತಿ ಗೊಂಡಬಾಳ, ಆರೋಗ್ಯ ನಿರೀಕ್ಷಕರಾದ ಸೋಮರಡ್ಡಿ, ಸಮುದಾಯ ಆರೋಗ್ಯಾಧಿಕಾರಿಗಳಾದ ಶಂಭುಲಿಂಗೇಶ್, ಗ್ರಾ.ಪಂ ಕಂಪ್ಯೂಟರ್ ಅಪರೇಟರ್ ಉಮೇಶ್ ಯಡಿಯಪ್ಪ ಗೌಡ್ರ, ಗ್ರಾಮ ಕಾಯಕ ಮಿತ್ರರಾದ ಸವಿತಾ ಗೂಳಪ್ಪ ಮುತ್ತಾಳ, ಕಾಯಕ ಮಿತ್ರರು, ಕೂಲಿಕಾರರು ಹಾಜರಿದ್ದರು.